/997965

# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 717
ಸದಸ್ಯರ ಹೆಸರು : ಶ್ರೀ ಕುಶಾಲಪ್ಪ ಎಂ.ಪಿ.
ಉತ್ತರಿಸುವ ಸಚಿವರು : ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲಾಣ ಸಚಿವರು
ಉತ್ತರಿಸುವ ದಿನಾಂಕ : 23.12.2022

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಕೊಡಗು ಜಿಲ್ಲೆಯ ಭಾಗಮಂಡಲದ ಕಾವೇರಿ ಉಗಮ ಸ್ಥಾನ ತಾಯಿ ಕಾವೇರಮ್ಮ ದೇವಾಲಯವು ಬಹಳ ಇತಿಹಾಸ ಪ್ರಸಿದ್ಧಿ ಆಗಿದ್ದು, ಈ ದೇವಾಲಯಕ್ಕೆ ದಿನನಿತ್ಯ ಸಾವಿರಾರು ಭಕ್ತಾದಿಗಳು ಆಗಮಿಸುತ್ತಿದ್ದು, ಇಲ್ಲಿ ಉನ್ನತ ಮಟ್ಟದ ಬಸ್ ನಿಲ್ದಾಣದ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೊಡಗು ಜಿಲ್ಲೆಯ ಭಾಗಮಂಡಲದ ಕಾವೇರಿ ಉಗಮ ಸ್ಥಾನವಾದ ತಾಯಿ ಕಾವೇರಮ್ಮ ದೇವಾಲಯಕ್ಕೆ ಬರುವ ಭಕ್ತಾದಿಗಳ ಅನುಕೂಲಕ್ಕಾಗಿ ನಿಗಮದ ವತಿಯಿಂದ 19 ಅನುಸೂಚಿಗಳಿಂದ 20 ಏಕ ಸುತ್ತುವಳಿಗಳಲ್ಲಿ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದ್ದು, ಕಲ್ಪಿಸಿರುವ ಸಾರಿಗೆ ಸೌಲಭ್ಯ ಅವಶ್ಯಕತೆಗೆ ಅನುಗುಣವಾಗಿದೆ.<br><br>ಅಲ್ಲದೇ, ವರ್ಷದ ಜಾತ್ರೆ ಸಮಯದಲ್ಲಿ ಭಕ್ತಾದಿಗಳ ಬೇಡಿಕೆಗೆ ಅನುಗುಣವಾಗಿ ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸಲಾಗುತ್ತಿದ್ದು, ಇನ್ನಿತರೆ ಸಮಯದಲ್ಲಿ ಬೇಡಿಕೆಯಿರದ ಕಾರಣ ಉನ್ನತ ಮಟ್ಟದ ಬಸ್ಸು ನಿಲ್ದಾಣದ ಅವಶ್ಯಕತೆ ಕಂಡುಬಂದಿರುವುದಿಲ್ಲ. |
| ಆ. | ನಿರಂತರವಾಗಿ ಮಳೆ ಸುರಿಯುವ ಈ ಪ್ರದೇಶದಲ್ಲಿ ಒಂದು ಅತ್ಯಾಧುನಿಕವಾದ ಮೂಲಭೂತ ಸೌಕರ್ಯಗಳನ್ನು ಹೊಂದಿದ ಹಾಗೂ ಮಳಿಗೆಗಳ ಸಮೇತ ಇರುವಂತಹ ಬಸ್ ನಿಲ್ದಾಣವನ್ನು ನಿರ್ಮಾಣ ಮಾಡುವ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು; ನಿರ್ಮಾಣ ಮಾಡಲು ಇರುವ ಸಮಸ್ಯೆಗಳೇನು; ನಿರ್ಮಾಣ ಮಾಡಿದ್ದಲ್ಲಿ, ಮಳಿಗೆಗಳ ನಿರ್ವಹಣಾ ಜವಾಬ್ದಾರಿಯನ್ನು ದೇವಸ್ಥಾನದ ಆಡಳಿತ ಸಮಿತಿಗೆ ನೀಡಬಹುದೇ? (ಸಂಪೂರ್ಣ ವಿವರ ನೀಡುವುದು). | ಪ್ರಸ್ತುತ ಭಾಗಮಂಡಲದಲ್ಲಿ ಬಸ್ ನಿಲ್ದಾಣ ನಿರ್ಮಾಣ ಮಾಡುವ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |

ಬಿ. ಶ್ರೀರಾಮುಲು
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು



enerated from eOffice by B SREERAMULU, TD-MIN(BS), TRANSPORT MINISTER, Trans on 21/12/2022 02:05 PM